# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1701 (2092)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ವಿಷಯ : A.I.C.R.P (All India Co-ordinated Research Project) ಯೋಜನೆಗೆ ತಾತ್ಕಾಲಿಕ ನೌಕರರನ್ನು ನೇಮಿಸಿಕೊಂಡು ಸರ್ಕಾರಕ್ಕೆ ನಷ್ಟ ಮಾಡಿರುವ ಬಗ್ಗೆ

(ಅ) K.A.V.F.S ವಿಶ್ವ ವಿದ್ಯಾಲಯ ಬೀದರ್ ಅಧೀನದಲ್ಲಿರುವ ಮೀನುಗಾರಿಕೆ ಕಾಲೇಜಿನಲ್ಲಿ ಅನುಷ್ಠಾನ ಮಾಡಲಾಗುತ್ತಿರುವ A.I.C.R.P (All India Co-ordinated Research Project) ಯೋಜನೆಗೆ 75% ಅನುದಾನ ಧನಸಹಾಯ ಸಂಸ್ಥೆಯಿಂದ ಹಾಗೂ 25% ಅನುದಾನ ರಾಜ್ಯ ಸರ್ಕಾರದಿಂದ ನೀಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಈ ಯೋಜನೆಗೆ Contractual Co-terminus ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿಗಳಿಗೆ ಸರ್ಕಾರದ ಸೇವಾ ನಿಯಮಾವಳಿಯಲ್ಲಿ ವೇತನ ಶ್ರೇಣಿ, ವಾರ್ಷಿಕ ವೇತನ ನೀಡಲು ಅವಕಾಶವಿದೆಯೇ ; ಈ ಬಗ್ಗೆ ಆರ್ಥಿಕ ಇಲಾಖೆಯಿಂದ ಒಪ್ಪಿಗೆ ಪಡೆಯಲಾಗಿದೆಯೇ; (ದಾಖಲೆ ಪ್ರತಿ ಒದಗಿಸುವುದು)

(ಇ) 2010ನೇ ಸಾಲಿನಿಂದ ಇಲ್ಲಿಯವರೆವಿಗೂ ಸರ್ಕಾರದ ಸೇವಾ ನಿಯಮಾವಳಿಯಲ್ಲಿ ಅವಕಾಶ ಇಲ್ಲದಿದ್ದರೂ ಸಹ ಸರ್ಕಾರದ ಗಮನಕ್ಕೆ ತರದೇ ನಿಯಮಬಾಹಿರವಾಗಿ ವೇತನ ಶ್ರೇಣಿ, ವಾರ್ಷಿಕ ವೇತನ ನೀಡಿ, ರಾಜ್ಯ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಿರುವವರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ;

(ಈ) ಈ ಯೋಜನೆಯ ಸಂಬಂಧ ದೂರುಗಳು ಸಲ್ಲಿಕೆಯಾಗಿರುತ್ತಿರುವ ಕಾರಣ ಯೋಜನೆಯನ್ನು ನಿಲ್ಲಿಸಲು ಧನಸಹಾಯ ಸಂಸ್ಥೆಗೆ ಕೋರಿಕೆ ಸಲ್ಲಿಸದಿರುವುದು (ಸಂಬಂಧಿಸಿದ ಎಲ್ಲಾ ಪತ್ರ ವ್ಯವಹಾರದ ಪ್ರತಿಗಳನ್ನು ಒದಗಿಸುವುದು) ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು ;

(ಉ) ಕಾಲೇಜಿನಲ್ಲಿ ಖಾಯಂ ಸಹಾಯಕ ಪ್ರಾಧ್ಯಾಪಕ/ನೌಕರರು ಇದ್ದರೂ ಸಹ ಯೋಜನೆಯ ಎಂ.ಓ.ಯು ನಂತೆ ಖಾಯಂ ಸಿಬ್ಬಂದಿಯನ್ನು ನಿಯೋಜಿಸಿಕೊಳ್ಳದೆ Contractual Co-terminus ಆಧಾರದ ಮೇಲೆ Senior Scientist ನೇಮಕ ಮಾಡಿಕೊಳ್ಳಲು ಕಾರಣವೇನು ;

(ಊ) ಸದರಿ ಯೋಜನೆಯು ಎಂ.ಓ.ಯು ನಂತೆ 1 ವರ್ಷದೊಳಗೆ ಖಾಯಂ ಸಿಬ್ಬಂದಿಯನ್ನು ನೇಮಿಸಿಕೊಳ್ಳಬೇಕಾಗಿದ್ದು, 10 ವರ್ಷ ಕಳೆದರೂ ಸಹ ಖಾಯಂ ಸಿಬ್ಬಂದಿಯನ್ನು ನೇಮಿಸಿಕೊಂಡಿಲ್ಲದಿರುವುದಕ್ಕೆ ಕಾರಣಗಳೇನು ? (ವಿವರ ನೀಡುವುದು)